(ಅನುಬಂಧ–3)

(iv) ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕ, 2009

ಶ್ರೀ ಜೆ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜೆ.ಕರುಣಾಕರ ರೆಡ್ಡಿ (ಕಂದಾಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಯಿತು.

(ಅನುಬಂಧ–4)

(v) ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ಎರಡನೇ ತಿದ್ದುಪಡಿ) ವಿಧೇಯಕ, 2009

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್.ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ, ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಆರ್ಥಿಕ ಹೊಣೆಗಾರಿಕೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–5)

(ಆ) ಪರ್ಯಾಲೋಚನಾ ಪ್ರಸ್ತಾವ ಮತ್ತು ಅಂಗೀಕಾರ

(i) ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗಗಳ (ತಿದ್ದುಪಡಿ) ವಿಧೇಯಕ,2009

ಪರ್ಯಾಲೋಚನಾ ಪ್ರಸ್ತಾವ

ಶ್ರೀ ವೆಂಕಟರಮಣಪ್ಪ (ಸಣ್ಣ ಕೈಗಾರಿಕೆ ಮತ್ತು ರೇಷ್ಮೆ ಸಚಿವರು) : ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ವೆಂಕಟರಮಣಪ್ಪ : ಮಾನ್ಯ ಅಧ್ಯಕ್ಷರೆ, ಕಳೆದ 50 ವರ್ಷಗಳಿಂದ ಖಾದಿ ಗ್ರಾಮೋದ್ಯೋಗಿಗಳಿಗೆ ಸುಮಾರು 220 ಕೋಟಿ ರೂಪಾಯಿ ಹಣವನ್ನು ಬೇರೆ ಬೇರೆ ಯೋಜನೆಯಡಿಯಲ್ಲಿ ಸಾಲ ನೀಡಲಾಗಿದೆ. ಬಡಗಿತನ ಮತ್ತು ಕಂಬಾರ, ಬೈವರಿ, ಹಣ್ಣು ಪರಿಷ್ಕರಣ ಸುಣ್ಣ ಉದ್ದಿಮೆ ಮತ್ತು ಅಲ್ಯುಮಿನಿಯಂ ಇಂತಹ 29 ಘಟಕಗಳಿಗೆ ಧನಸಹಾಯವನ್ನು ನೀಡಿದೆ. ಅದರಲ್ಲಿ 25,000 ಘಟಕಗಳಿಗೆ 220 ಕೋಟಿ ರೂಪಾಯಿಗಳನ್ನು ಫಲಾನುಭವಿಗಳಿಗೆ ಸಾಲ ಮಂಜೂರು ಮಾಡಿದೆ. ಅದರಲ್ಲಿ ಸುಮಾರು 105 ಕೋಟಿ ರೂಪಾಯಿ ಸಾಲ ಬರಬೇಕಾಗಿದೆ. ಅವರು ಸಾಲ ತೆಗೆದುಕೊಳ್ಳ ಬೇಕಾದರೆ ಜಮೀನು, ಪ್ರಾಪರ್ಟಿಯನ್ನು ಆಧಾರ ಮಾಡಿದ್ದಾರೆ.

ಅದರಲ್ಲಿ ಸಾಲ ವಸೂಲಿ ಆಗದಿರುವುದಕ್ಕೆ revenue recovery ಮೂಲಕ ವಸೂಲಿ ಮಾಡುವುದಕ್ಕೆ ಮಂಡಳಿಯಲ್ಲಿ ಅಧಿಕಾರ ಇದೆ. ಕಂದಾಯ ವಸೂಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ